# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತೇಳನೆಯ ಅಧಿವೇಶನ

## <u>ಕಾರ್ಯಕಲಾಪಗಳ ಪಟ್ಟಿ</u>

**ಮಂಗಳವಾರ, ದಿನಾಂಕ:20ನೇ ಸೆಪ್ಟೆಂಬರ್, 2022**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಏಳನೆಯ ಪಟ್ಟಿ

ಆ) **<u>ತಡೆಹಿಡಿಯಲಾದ ಪ್ರಶ್ನೆಗಳು:</u>**

| | |
|---|---|
| 2ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಟಿ.ಎ. ಶರವಣ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 23 (197)<br><br>2ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಎಸ್.ರುದ್ರೇಗೌಡ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 24 (154)<br><br>4ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಸಲೀಂ ಅಹಮದ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 51 (364) | ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು |
| 6ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಮಧು ಜಿ. ಮಾದೇಗೌಡ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 87 (719) | ಮಾನ್ಯ ಸಹಕಾರ ಸಚಿವರು |

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಏಳನೆಯ ಪಟ್ಟಿ

## 02. ವರದಿಗಳನ್ನೊಪ್ಪಿಸುವುದು

ಅ) **ಶ್ರೀ ಎಸ್.ರವಿ (ಸದಸ್ಯರು, ವಿಶೇಷ ಸದನ ಸಮಿತಿ) ಅವರು:–** ರಾಜ್ಯದ ವಿವಿಧ ನಿಗಮಗಳಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳಲ್ಲಿ ನಡೆದಿರುವ ಅವ್ಯವಹಾರಗಳನ್ನು ಪರಿಶೀಲಿಸಲು ರಚಿಸಲಾಗಿರುವ ವಿಶೇಷ ಸದನ ಸಮಿತಿಯ ಮಧ್ಯಂತರ ವರದಿಯನ್ನೊಪ್ಪಿಸುವುದು.

ಆ) **ಶ್ರೀ ಎನ್.ರವಿಕುಮಾರ್ ಅವರು (ಸದಸ್ಯರು, ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿ)** ಅವರು ಕರ್ನಾಟಕ ವಿಧಾನ ಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿಯ 36ನೇ ವರದಿಯನ್ನೊಪ್ಪಿಸುವುದು.

## 03. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಅ) **ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು)** ಅವರು:– ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ, ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ಸಮಗ್ರ ಹಣಕಾಸು ನಿರ್ವಹಣಾ ವ್ಯವಸ್ಥೆ ಖಜಾನೆ–II ಮೇಲಿನ ಕಾರ್ಯನಿರ್ವಹಣಾ ಲೆಕ್ಕಪರಿಶೋಧನಾ ವರದಿಯನ್ನು (2021ನೇ ವರ್ಷದ ವರದಿ ಸಂಖ್ಯೆ–4) ಸಭೆಯ ಮುಂದಿಡುವುದು.

ಆ) **ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು)** ಅವರು:– ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ ಇಲಾಖೆಗಳು ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಮೇಲಿನ 31ನೇ ಮಾರ್ಚ್, 2020ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ ಅನುಪಾಲನಾ ಲೆಕ್ಕಪರಿಶೋಧನಾ ವರದಿಯನ್ನು (2022ನೇ ವರ್ಷದ ವರದಿ ಸಂಖ್ಯೆ–3) ಸಭೆಯ ಮುಂದಿಡುವುದು.

ಇ) **ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು)** ಅವರು:– ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ, ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ಕರ್ನಾಟಕದಲ್ಲಿ ನಗರ ಪ್ರದೇಶದ ಬಡವರಿಗೆ ವಸತಿ ಯೋಜನೆಗಳ ಅನುಷ್ಠಾನದ ಮೇಲಿನ ಕಾರ್ಯನಿರ್ವಹಣಾ ಲೆಕ್ಕಪರಿಶೋಧನಾ ವರದಿಯನ್ನು (2022ನೇ ವರ್ಷದ ವರದಿ ಸಂಖ್ಯೆ–4) ಸಭೆಯ ಮುಂದಿಡುವುದು.

ಈ) **ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು)** ಅವರು:– ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ದೀನದಯಾಳ್ ಉಪಾಧ್ಯಾಯ ಗ್ರಾಮ ಜ್ಯೋತಿ ಯೋಜನೆ (ಡಿಡಿಯುಜಿಜೆವೈ)/ ಪ್ರಧಾನ ಮಂತ್ರಿ ಸಹಜ್ ಬಿಜಲಿ ಹರ್ ಘರ್ ಯೋಜನೆಯ (ಸೌಭಾಗ್ಯ) ಅನುಷ್ಠಾನದ ಮೇಲಿನ ಸಾಧನಾ ಲೆಕ್ಕಪರಿಶೋಧನಾ ವರದಿಯನ್ನು (2022ನೇ ವರ್ಷದ ವರದಿ ಸಂಖ್ಯೆ–5) ಸಭೆಯ ಮುಂದಿಡುವುದು.

## 04. ಚುನಾವಣಾ ಪ್ರಸ್ತಾವ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಮಾನ್ಯ ಸಭಾನಾಯಕರು ಹಾಗೂ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು) ಅವರು:–**

ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯಕ್ಕೆ ವಿಧಾನ ಪರಿಷತ್ತಿನ ಒಬ್ಬರು ಶಾಸಕರನ್ನು ಹಾಗೂ ಕರ್ನಾಟಕ ರಾಜ್ಯ ಅಂಗವಿಕಲರ ಸಮನ್ವಯ ಸಮಿತಿಗೆ ವಿಧಾನ ಪರಿಷತ್ತಿನ ಒಬ್ಬರು ಶಾಸಕರನ್ನು ಚುನಾಯಿಸುವ ಬದಲು ನಾಮನಿರ್ದೇಶಿಸಲು ಮಾನ್ಯ ಸಭಾಪತಿಯವರಿಗೆ ಅಧಿಕಾರ ನೀಡುವ ಬಗ್ಗೆ ಪ್ರಸ್ತಾವವನ್ನು ಮಂಡಿಸುವುದು.

## 05. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಕೆ.ಎ. ತಿಪ್ಪೇಸ್ವಾಮಿ** ಅವರು ಅಣ್ಣೆಪುರ ಗ್ರಾಮದ ಸರ್ವೆ ನಂ.18ರ ವಾರ್ಡ್ ನಂ.143 ರಲ್ಲಿ ಹಾಪ್ ಕಾಮ್ಸ್ ಸಂಸ್ಥೆಯವರು 2.08 ಎಕರೆ ಜಮೀನನ್ನು ಆಕ್ರಮಿಸಿಕೊಂಡಿರುವ ಕುರಿತು ಮಾನ್ಯ ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರ ಗಮನ ಸೆಳೆಯುವುದು.

02. **ಶ್ರೀ ಸಲೀಂ ಅಹಮದ್** ಅವರು ಪ್ರಮುಖ ಖಾಯಿಲೆಗಳಿಗೆ ಅಗತ್ಯವಾಗಿ ಬೇಕಾಗಿರುವ ಔಷಧಿಗಳು ಜನೌಷಧ ಕೇಂದ್ರಗಳಲ್ಲಿ ಲಭ್ಯವಿಲ್ಲದಿರುವ ಕುರಿತು ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

03. **ಶ್ರೀ ಸಿ.ಎನ್. ಮಂಜೇಗೌಡ** ಅವರು ವೈದ್ಯಕೀಯ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ಸ್ವಾಯತ್ತ ಸಂಸ್ಥೆಗಳ ಖಾಯಂ ನೌಕರರಿಗೆ ಆರೋಗ್ಯ ಸಂಜೀವಿನಿ ಯೋಜನೆಯನ್ನು ಜಾರಿಗೊಳಿಸುವ ಕುರಿತು ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

04. **ಶ್ರೀ ಎಂ.ಎಲ್. ಅನಿಲ್ ಕುಮಾರ್** ಅವರು ಚಿಂತಾಮಣಿ ತಾಲ್ಲೂಕು ಕಸಬಾ ಹೋಬಳಿ ಮುನಗನಹಳ್ಳಿಯ ಸರ್ವೆ ನಂ.36/2ರ ಕೆರೆ-ಕಟ್ಟೆ ಮೊದಲಾದ ಜಲಕಾಯಗಳಲ್ಲಿನ ಹಾಗೂ ನಿರ್ಬಂಧಿತ ಪ್ರದೇಶದಲ್ಲಿನ ಅಕ್ರಮ ಕಟ್ಟಡ/ಸಂರಚನೆಗಳನ್ನು ತೆರವುಗೊಳಿಸುವ ಕುರಿತು ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

05. **ಶ್ರೀ ಪುಟ್ಟಣ್ಣ** ಅವರು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದವರು ಕೆಂಪೇಗೌಡ ಬಡಾವಣೆ ನಿರ್ಮಾಣ ಹಾಗೂ ಪೆರಿಫೆರಲ್ ರಸ್ತೆ ನಿರ್ಮಾಣಕ್ಕಾಗಿ ಸ್ವಾಧೀನ ಪಡಿಸಿಕೊಂಡಿರುವ ರೈತರ ಜಮೀನುಗಳನ್ನು ಅನ್ಯ ಉದ್ದೇಶಗಳಿಗೆ ಬಳಸಿಕೊಳ್ಳುತ್ತಿರುವ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

## 06. ನಿಯಮ 330ರ ಮೇರೆಗೆ

೦1. **ಶ್ರೀ ಮರಿತಿಬ್ಬೇಗೌಡ** ಅವರು ಚಿಕ್ಕಬಳ್ಳಾಪುರ ಜಿಲ್ಲೆ, ಚಿಂತಾಮಣಿ ತಾಲ್ಲೂಕು, ಕೋಟಗಲ್ ಗ್ರಾಮದ ಸರ್ವೇ ನಂ.11ರಲ್ಲಿ ಜಿ.ಟಿ.ಬಿ. ಕ್ರಷರ್ಸ್, ಇವರು ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಅಧಿಕಾರಿಗಳೊಂದಿಗೆ ಶಾಮೀಲಾಗಿ ಕಾನೂನು ಬಾಹಿರವಾಗಿ ಅಕ್ರಮ ಗಣಿಗಾರಿಕೆಯಲ್ಲಿ ತೊಡಗಿಕೊಂಡಿರುವ ಕುರಿತು ಪ್ರಸ್ತಾಪಿಸುವುದು.

೦2. **ಶ್ರೀ ಪಿ.ಆರ್ ರಮೇಶ್** ಅವರು ಕುಣಿಗಲ್ ತಾಲ್ಲೂಕಿನ ವೈ. ಹೊಸಹಳ್ಳಿಯಿಂದ ಹಂಪಾಪುರ ಮಧ್ಯೆ ಸುಮಾರು 600 ಮೀಟರ್ ಉದ್ದದ ಸಂಪರ್ಕ ಸೇತುವೆಯನ್ನು ನಿರ್ಮಾಣ ಮಾಡುವ ಕುರಿತು ಪ್ರಸ್ತಾಪಿಸುವುದು.

೦3. **ಶ್ರೀ ಡಿ.ಎಸ್. ಅರುಣ್** ಅವರು ಶಿವಮೊಗ್ಗ ಜಿಲ್ಲೆಯಲ್ಲಿ ಉತ್ಪಾದನೆಯಾಗುವ ಅಡಿಕೆ ಮಾರಾಟದ ಒಟ್ಟು ವಹಿವಾಟಿನ ತೆರಿಗೆ ಆದಾಯದ ಬಗ್ಗೆ ಗೊಂದಲವಿರುವ ಕುರಿತು ಪ್ರಸ್ತಾಪಿಸುವುದು.

೦4. **ಶ್ರೀ ಎಂ.ನಾಗರಾಜು ಹಾಗೂ ಶ್ರೀ ಪ್ರಕಾಶ್ ಕೆ. ರಾಥೋಡ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು** ಅವರುಗಳು ದಿನಗೂಲಿ ಕಾರ್ಮಿಕರ ಆತ್ಮಹತ್ಯೆಗಳನ್ನು ತಡೆಗಟ್ಟಲು ಕ್ರಮಕೈಗೊಳ್ಳುವ ಕುರಿತು ಪ್ರಸ್ತಾಪಿಸುವುದು.

೦5. **ಶ್ರೀಯುತರುಗಳಾದ ಕೆ.ಎ. ತಿಪ್ಪೇಸ್ವಾಮಿ, ಎಸ್.ಎಲ್.ಭೋಜೇಗೌಡ, ಗೋವಿಂದರಾಜು ಮತ್ತು ಸಿ.ಎನ್. ಮಂಜೇಗೌಡ** ಅವರುಗಳು ರಾಜ್ಯದಲ್ಲಿ ಇತ್ತೀಚಿಗೆ ನಡೆದಿರುವ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ನೇಮಕಾತಿ ಪ್ರಕ್ರಿಯೆಯಲ್ಲಿನ ಅವ್ಯವಹಾರದ ಕುರಿತು ಪ್ರಸ್ತಾಪಿಸುವುದು.

೦6. **ಡಾ. ಕೆ. ಗೋವಿಂದರಾಜು** ಅವರು ಕ್ರೀಡಾ ಶಿಕ್ಷಣ ತರಬೇತಿ ಪಡೆದವರನ್ನು ಸರ್ಕಾರಿ ಹಾಗೂ ಅನುದಾನಿತ ಶಾಲಾ/ ಕಾಲೇಜಿನಲ್ಲಿ ದೈಹಿಕ ಶಿಕ್ಷಕರನ್ನಾಗಿ ನೇಮಕ ಮಾಡಿಕೊಳ್ಳುವ ಕುರಿತು ಪ್ರಸ್ತಾಪಿಸುವುದು.

## 07. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮೇಲಿನ ಮುಂದುವರೆದ ಚರ್ಚೆ

**ಶ್ರೀಯುತರುಗಳಾದ;–**

| | |
|---|---|
| ಬಿ.ಕೆ.ಹರಿಪ್ರಸಾದ್, ಮಾನ್ಯ ವಿರೋಧ ಪಕ್ಷದ ನಾಯಕರು, ಪ್ರಕಾಶ್ ಕೆ. ರಾಥೋಡ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು, ಸಲೀಂ ಅಹಮದ್, ಕೆ.ಎ.ತಿಪ್ಪೇಸ್ವಾಮಿ, ಶರವಣ ಟಿ.ಎ. ಮತ್ತು ಬಿ.ಎಂ. ಫಾರೂಖ್ ಹಾಗೂ ಇತರರುಗಳು | ರಾಜ್ಯದಲ್ಲಿ ಇತ್ತೀಚೆಗೆ ಸುರಿಯುತ್ತಿರುವ ಮಳೆಯಿಂದಾಗಿ ಬೆಂಗಳೂರು ನಗರ ಸೇರಿದಂತೆ ರಾಜ್ಯದ ಬಹುತೇಕ ಜಿಲ್ಲೆಗಳು ಪ್ರವಾಹ ಭೀತಿಯನ್ನು ಎದುರಿಸುತ್ತಿದ್ದು, ರಾಜ್ಯದ ಹೆದ್ದಾರಿ ಮತ್ತು ರಸ್ತೆಗಳು ಕೊಚ್ಚಿಹೋಗಿದ್ದು, ಕೆರೆ ಕೋಡಿಗಳು ಒಡೆದು ಅಪಾರ ಹಾನಿಯುಂಟಾಗಿ ಜನರು ಸಂಕಷ್ಟಕ್ಕೆ ಒಳಗಾಗಿರುವ ಕುರಿತು.<br>ನಾಲ್ಕನೇ ದಿನ |

## 08. ಅರ್ಧ ಗಂಟೆ ಕಾಲಾವಧಿ ಚರ್ಚೆ

೦1) ರಾಜ್ಯದಲ್ಲಿರುವ ಯಶಸ್ವಿನಿ ಯೋಜನೆ ಕುರಿತು ದಿನಾಂಕ:13.09.2022ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:27 (128)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಪ್ರಕಾಶ್ ಕೆ.ರಾಥೋಡ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

೦2) ರಾಜ್ಯದ ಪೊಲೀಸರಿಗೆ ಕಂಪ್ಯೂಟರ್ ಕಲಿಕೆ ಮಾಡಿರುವ ಬಗ್ಗೆ ದಿನಾಂಕ:15.09.2022ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:395 (474)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಆಯನೂರು ಮಂಜುನಾಥ್** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**